# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ರಾಯನಾಳ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ ಎ.ವಿ.ಸುಂಕದ ರವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಕುರಿತು.

**ಓದಲಾಗಿದೆ:**

1) ನಿಬಂಧಕರು, ಎ.ಆರ್.ಇ.-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರ ಅ.ಸ.ಪ.ಸಂ. Compt/UPLOK/BGM-5497/2012/ARE-5, ದಿನಾಂಕ:01.10.2016
1) ಸರ್ಕಾರದ ಸಮಸಂಖ್ಯೆಯ ಪತ್ರ, ದಿನಾಂಕ 09.11.2016

**ಪ್ರಸ್ತಾವನೆ:**

ಮೇಲೆ ಓದಲಾದ (1) ರಲ್ಲಿನ ನಿಬಂಧಕರು, ಎ.ಆರ್.ಇ.-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರದ ಸಂಗಡ ಕಳುಹಿಸಿರುವ ಮಾನ್ಯ ಉಪಲೋಕಾಯುಕ್ತರು-1 ರವರು ದಿನಾಂಕ: 27.09.2016 ರಂದು ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ಸಲ್ಲಿಸಿರುವ ವರದಿಯಲ್ಲಿ ಶ್ರೀ ಗುರುಸಿದ್ದಪ್ಪ ಬಿನ್ ಮಲ್ಲಪ್ಪ ಬೆಳಗಲಿ, ಗಂಗಿವಾಲ ಗ್ರಾಮ, ರಾಯನಾಳಖ ಅಂಚೆ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ಇವರು, ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ರಾಯನಾಳ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ ಎ.ವಿ.ಸುಂಕದ ಮತ್ತು ಅಧ್ಯಕ್ಷರಾಗಿದ್ದ ಶ್ರೀ ಯಲ್ಲಪ್ಪ ಬಿನ್ ಕರೆಪ್ಪ ಜವಳಗೇರಿ (ಇನ್ನು ಮುಂದೆ ಎದುರುದಾರ 1 ಮತ್ತು 2 ಎಂದು ಕರೆಯಲ್ಪಡುತ್ತಾರೆ.) ಇವರು ಗ್ರಾಮ ಪಂಚಾಯತಿ ಸದಸ್ಯರ ಸಂಬಂಧಿಕರನ್ನು ವಸತಿ ಯೋಜನೆಯ ಫಲಾನುಭವಿಗಳನ್ನಾಗಿ ಆಯ್ಕೆ ಮಾಡಿ, ಕರ್ತವ್ಯ ಲೋಪ ಎಸಗಿರುವ ಬಗ್ಗೆ ನೀಡಿದ ದೂರನ್ನು ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 9 ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದು, ಕೆಳಕಂಡ ಅಂಶಗಳು ಕಂಡುಬಂದಿರುವುದಾಗಿ ಕೆಳಗಿನಂತೆ ವರದಿ ಮಾಡಲಾಗಿದೆ.

ತನಿಖಾ ವರದಿಯ ಕಡತದಲ್ಲಿನ ಸಂಗತಿಗಳು ಹಾಗೂ ದಾಖಲಾತಿಗಳಿಂದ ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಎದುರುದಾರರಾದ ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ರಾಯನಾಳ ಗ್ರಾಮ ಪಂಚಾಯತಿಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀಮತಿ ಎ.ವಿ.ಸುಂಕದ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು, 1966ರ ನಿಯಮ 3(1) ರ ಅನ್ವಯ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 14-ಎ ರಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲು ಶಿಫಾರಸ್ಸು ಮಾಡಿರುತ್ತಾರೆ.

ಪರಿಶೀಲಿಸಲಾಗಿ, ಲೋಕಾಯುಕ್ತ ವರದಿಯ ಶಿಫಾರಸ್ಸಿನಂತೆ ಧಾರವಾಡ ಜಿಲ್ಲೆಯ ಹುಬ್ಬಳ್ಳಿ ತಾಲ್ಲೂಕಿನ ರಾಯನಾಳ ಗ್ರಾಮ ಪಂಚಾಯತಿಯ ಕೆಳಕಂಡ ಚುನಾಯಿತ ಪ್ರತಿನಿಧಿಗಳ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993 ರನ್ವಯ ಕ್ರಮವಹಿಸಲು ಸಕ್ಷಮ ಪ್ರಾಧಿಕಾರಿಯಾದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಧಾರವಾಡ ಇವರಿಗೆ ಮೇಲೆ ಓದಲಾದ (2) ರಲ್ಲಿ ನಿರ್ದೇಶನ ನೀಡಲಾಗಿದೆ.

1) ಶ್ರೀ ಯಲ್ಲಪ್ಪ ಬಿನ್ ಕರೆಪ್ಪ, ಜವಳಗೇರಿ, ಅಧ್ಯಕ್ಷರು.
2) ಶ್ರೀ ಶಿವಲಿಂಗಪ್ಪ ದ್ಯಾಮಣ್ಣ ಯರಗೇರಿ, ಉಪಾಧ್ಯಕ್ಷರು.
3) ಶ್ರೀಮತಿ ಸವಕ್ಕ ಬಸಪ್ಪ ಹರಿಜನ್, ಸದಸ್ಯರು.
4) ಶ್ರೀ ಶಿವನಗೌಡ ನಾಗನಗೌಡ ಶೆಟ್ಟಣ್ಣಗೌಡ್ರ, ಸದಸ್ಯರು.
5) ಶ್ರೀ ಗದಿಗೆಪ್ಪ ನಿಂಗಪ್ಪ ಗುಂಜಾಲ್, ಸದಸ್ಯರು.
6) ಶ್ರೀಮತಿ ಗದಿಗೆವ್ವ ಮಲ್ಲಪ್ಪ ಬಣಜಿಗೇರ್, ಸದಸ್ಯರು.

7) ಶ್ರೀ ಸೋಮಣ್ಣ ಮಲ್ಲಪ್ಪ ಸವ್ವಸೆ, ಸದಸ್ಯರು.
8) ಶ್ರೀಮತಿ ರತ್ನವ್ವ ಬಸಪ್ಪ ದಾಸರ್, ಸದಸ್ಯರು.
9) ಶ್ರೀಮತಿ ದೇವಕ್ಕ ರಮೇಶ್ ಬಡಿಗೇರ್, ಸದಸ್ಯರು.
10) ಶ್ರೀಮತಿ ಮುತ್ತವ್ವ ಮಡಿವಾಳಪ್ಪ ಅಂಗಡಿ, ಸದಸ್ಯರು.
11) ಶ್ರೀ ಪರಶುರಾಮ್ ಸಿದ್ಧಪ್ಪ ಮಾಶೆಟ್ಟಿ, ಸದಸ್ಯರು.
12) ಶ್ರೀ ಬಸಪ್ಪ ಭರಮಪ್ಪ ಮರಡಗಿ, ಸದಸ್ಯರು.
13) ಶ್ರೀ ಮಂಜುನಾಥ ಬಸಪ್ಪ ಹರಿಜನ್, ಸದಸ್ಯರು.

ಸರ್ಕಾರವು ಮಾನ್ಯ ಉಪಲೋಕಾಯುಕ್ತರ ವರದಿಯನ್ನು ಪರಿಶೀಲಿಸಿ ಈ ಪ್ರಕರಣದಲ್ಲಿ ಒಳಗೊಂಡಿರುವ ಶ್ರೀಮತಿ ಎ.ವಿ.ಸುಂಕದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಾಯನಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರ ವಿರುದ್ಧ ವಿಚಾರಣೆ ನಡೆಸುವುದು ಸೂಕ್ತವೆಂದು ಭಾವಿಸಿ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 14-ಎ ರನ್ವಯ ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತರಿಗೆ ವಹಿಸುವ ಸಲುವಾಗಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 714 ಗ್ರಾಪಂಕಾ 2016, ಬೆಂಗಳೂರು, ದಿನಾಂಕ: 09.11.2016</u>**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಎ.ವಿ.ಸುಂಕದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಾಯನಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ ಇವರು ನಿವೃತ್ತರಾಗಿರುವುದರಿಂದ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 214 ರಡಿ ಸರ್ಕಾರವಿ ಮಂಜೂರಾತಿ ನೀಡಿರುವುದರಿಂದ, ಸದರಿಯವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 14-ಎ ಅಡಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಿದೆ.

ಈ ಪ್ರಕರಣದಲ್ಲಿ ಸರ್ಕಾರವು ಶಿಸ್ತು ಪ್ರಾಧಿಕಾರವಾಗಿದ್ದು, ಆಪಾದಿತರಿಗೆ, ಕರ್ನಾಟಕ ನಾಗರೀಕ ಸೇವಾ ನಿಯಮಗಳು 1957ರ ನಿಯಮ-214 ರ ಅಡಿ ಸೂಚಿತವಾದ ಯಾವುದಾದರೊಂದು ಅಥವಾ ಹೆಚ್ಚಿನ ದಂಡನೆ ವಿಧಿಸಲು ಸಕ್ಷಮ ಪ್ರಾಧಿಕಾರವಾಗಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ವಿ.ಅರುಣ್ ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1) ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2) ಮಾನ್ಯ ಉಪಲೋಕಾಯುಕ್ತ-1 ರವರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3) ನಿಬಂಧಕರು ಎ.ಆರ್.ಇ.-5, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರಿಗೆ – ಮೇಲೆ ಓದಲಾದ (1) ರಲ್ಲಿನ ಎಲ್ಲಾ ಲಗತ್ತುಗಳು ಹಾಗೂ ಮಾನ್ಯ ಉಪಲೋಕಾಯುಕ್ತ ವರದಿಯ ಮೂಲ ಪ್ರತಿಗಳನ್ನು ಇದರೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಧಾರವಾಡ ಜಿಲ್ಲಾ ಪಂಚಾಯತಿ, ಧಾರವಾಡ.
5) ಕಾರ್ಯನಿರ್ವಾಹಕ ಅಧಿಕಾರಿ, ಹುಬ್ಬಳ್ಳಿ ತಾಲ್ಲೂಕು ಪಂಚಾಯತಿ, ಹುಬ್ಬಳ್ಳಿ, ಧಾರವಾಡ ಜಿಲ್ಲೆ. (ಸಂಬಂಧಿಸಿದ ನೌಕರರಿಗೆ ಆದೇಶದ ಪ್ರತಿಯನ್ನು ತಲುಪಿಸಿ ಸರ್ಕಾರಕ್ಕೆ ಸ್ವೀಕೃತಿ ನೀಡುವಂತೆ ಕೋರಿದೆ.)
6) ಶ್ರೀಮತಿ ಎ.ವಿ.ಸುಂಕದ, ಪಂಚಾಯತಿ ಅಭಿವೃದ್ಧಿ ಅಧಿಕಾರಿ, ರಾಯನಾಳ ಗ್ರಾಮ ಪಂಚಾಯತಿ, ಹುಬ್ಬಳ್ಳಿ ತಾಲ್ಲೂಕು, ಧಾರವಾಡ ಜಿಲ್ಲೆ.
7) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
8) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.